# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 876 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 15.12.2025 |
| ಉತ್ತರಿಸುವ ಸಚಿವರು | : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪ್ರಸ್ತುತ ಬಿಪಿಎಲ್/ಎಪಿಎಲ್/ಇನ್ನಿತರ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು; ಬಿಪಿಎಲ್/ಎಪಿಎಲ್ ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗದಿ ಪಡಿಸಿರುವ ಮಾನದಂಡಗಳೇನು; | ರಾಜ್ಯದಲ್ಲಿ ದಿನಾಂಕ:28.11.2025 ರನ್ವಯ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತೆ ಇರುತ್ತವೆ. |

| ಪಡಿತರ ಚೀಟಿ ವಿಧ | ಪಡಿತರ ಚೀಟಿಗಳ ಸಂಖ್ಯೆ | ಪಡಿತರ ಫಲಾನುಭವಿಗಳ ಸಂಖ್ಯೆ |
|---|---|---|
| ಅಂತ್ಯೋದಯ ಅನ್ನ ಪಡಿತರ ಚೀಟಿ (AAY) | **10,53,626** | **43,13,141** |
| ಆದ್ಯತಾ ಪಡಿತರ ಚೀಟಿ (PHH) | **1,14,10,557** | **4,00,57,222** |
| ಆದ್ಯತೇತರ ಪಡಿತರ ಚೀಟಿ (NPHH) | **28,86,530** | **98,78,464** |
| ಒಟ್ಟು | **1,53,51,013** | **5,42,48,827** |

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು(PHH) ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

- ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು /ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ ಪಾವ

| | |
|---|---|
| | ತೆರಿಗೆ/ವ್ಯಾಟ್/ವೃತ್ತಿ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಆ ಬಿಪಿಎಲ್/ಎಪಿಎಲ್/ಇನ್ನಿತರ ಪಡಿತರ ಚೀಟಿಗಳನ್ನು ಯಾವ ನಿಯಮದ ಅನುಸಾರ ರದ್ದುಪಡಿಸಲಾಗುತ್ತದೆ ಮತ್ತು ರದ್ದುಪಡಿಸುವ ಅಧಿಕಾರ ಮತ್ತು ಹೊಸ ಪಡಿತರ ಚೀಟಿಗಳನ್ನು ನೀಡುವ ಅಧಿಕಾರ ಯಾರಿಗಿದೆ; (ಸಂಪೂರ್ಣ ಮಾಹಿತಿ ನೀಡುವುದು); | ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br><br>**1. CBDT Income Group Annual Income > 1,20,000**<br>**2. GSTN Gross Turnover >25 Lacs**<br>**3. MCA Individual as Director**<br>**4. PDS Duplicate RC Inter State**<br>**5. PDS Duplicate RC Intra State**<br>**6. PDS RC Member Above 100 Years**<br>**7. PDS Silent RC >12 Months**<br>**8. PDS Silent RC 6-12 Months**<br>**9. PDS Single Member Below 18 Years**<br>**10. PM KISAN Land Holding >7.5 Acres**<br>**11. UIDAI Aadhaar Status Deceased**<br>**12. Vehicle Ownership value Owning LIGHT MOTOR VEHICLE**<br>**13. Vehicle Ownership value Owning MEDIUM MOTOR VEHICLE**<br>**14. Vehicle Ownership value** |

| | | |
|---|---|---|
| ಇ | ಹೊಸ ಬಿಪಿಎಲ್/ಎಪಿಎಲ್/ಇನ್ನಿತರ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಎಷ್ಟು ಸಮಯದ ಒಳಗಾಗಿ ಪಡಿತರ ಚೀಟಿಯನ್ನು ನೀಡಲಾಗುತ್ತದೆ; ಅರ್ಜಿ ಸಲ್ಲಿಸಲು ಯಾವ ಕಾಲಮಿತಿ ಇರುತ್ತದೆ; ಕಾಲಮಿತಿಯಲ್ಲಿ ಪಡಿತರ ಚೀಟಿಗಳನ್ನು ನೀಡಲಾಗಿದೆಯೇ; (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಪಡಿತರ ಚೀಟಿ ನೀಡಲು ಯಾವುದೇ ಸಮಯಾವಕಾಶ ನಿಗಧಿ ಪಡಿಸಿರುವುದಿಲ್ಲ.<br><br>ದಿನಾಂಕ: **28.11.2025** ರ ಅಂತ್ಯಕ್ಕೆ ಆದ್ಯತಾ ಪಡಿತರ ಚೀಟಿ ಕೋರಿ ಈಗಾಗಲೇ ಸಲ್ಲಿಸಿರುವ ಒಟ್ಟು **3,36,982** ಅರ್ಜಿಗಳು ಬಾಕಿ ಇದ್ದು ಅರ್ಜಿಗಳ ಪರಿಶೀಲನಾ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ರಾಜ್ಯದಲ್ಲಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು ಬಡತನ ರೇಖೆಗಿಂತ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಕ್ರಮವಹಿಸಲಾಗುತ್ತದೆ. |
| ಈ | **2022** ಮೇ ತಿಂಗಳಿನಿಂದ **2025** ನವೆಂಬರ್ ಅಂತ್ಯದವರೆಗೆ ಎಷ್ಟು, ಯಾವ ಯಾವ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ; ಹಾಗೂ ಎಷ್ಟು ಜನರ ಹೆಸರನ್ನು ತೆಗೆದು ಹಾಕಲಾಗಿದೆ; ರದ್ದುಪಡಿಸಲು, ಹೆಸರುಗಳನ್ನು ತೆಗೆದು ಹಾಕಲು ಅನುಸರಿಸಿರುವ ನಿಯಮಗಳೇನು; | ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಪಡಿತರ ಚೀಟಿಗಳನು ನಿಗಧಿಪಡಿಸಿರುವ ಮಾನದಂಡಗಳನ್ವಯ ಆದ್ಯತಾ ಪಡಿತರ ಚೀಟಿಗಳನ್ನು ರದ್ದು/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗುತ್ತಿದೆ.<br>ಮೇ **2022**ರ ಮಾಹೆಯಿಂದ ನವೆಂಬರ್ **2025** ರ ಮಾಹೆಯವರೆಗೂ **2,10,106** ಆದ್ಯತಾ ಪಡಿತರ ಚೀಟಿಗಳನ್ನು ಹಾಗೂ **1,69,639** ಪಡಿತರ ಫಲಾನುಭವಿಗಳನ್ನು ರದ್ದು ಪಡಿಸಲಾಗಿರುತ್ತದೆ.<br>ಅಲ್ಲದೇ **77,312** ಆದ್ಯತೇತರ ಪಡಿತರ ಚೀಟಿಗಳನ್ನು ಹಾಗೂ **1,38,480** ಪಡಿತರ ಫಲಾನುಭವಿಗಳನ್ನು ರದ್ದುಪಡಿಸಲಾಗಿರುತ್ತದೆ. |
| ಉ | ಸರ್ಕಾರವು ಪಡಿತರ ಚೀಟಿಗಳ ನವೀಕರಣ /ಪುನರ್ ಪರಿಶೀಲನೆ ಎಂಬ ಹೆಸರಿನಲ್ಲಿ ಚೀಟಿಗಳನು ರದ್ದು ಮಾಡುತ್ತಿರುವುದಕ್ಕೆ ಕಾರಣವೇನು; ಬಡ ಕುಟುಂಬಗಳ ಆಹಾರ ಭದ್ರತೆಯನ್ನು ಕಾಪಾಡುವುದು ಸರ್ಕಾರದ ಮೂಲಭೂತ ಜವಾಬ್ದಾರಿ ಆಗಿರುವುದು. ಈಗ ವಿವಿಧ ತಾಂತ್ರಿಕ ಕಾರಣಗಳು, ತಪಾಸಣೆ ಎಂಬ ಹೆಸರಿನಲ್ಲಿ ಸಾವಿರಾರು ಪಡಿತರ ಚೀಟಿಗಳು ರದ್ದಾಗುತ್ತಿರುವುದು ಗಂಭೀರ ಪ್ರಮಾದವಲ್ಲವೇ; | ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಪಡಿತರ ಚೀಟಿಗಳನು ನಿಗಧಿಪಡಿಸಿರುವ ಮಾನದಂಡಗಳನ್ವಯ ಆದ್ಯತಾ ಪಡಿತರ ಚೀಟಿಗಳನ್ನು ರದ್ದು/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗುತ್ತಿದೆ. |
| ಊ | ಪಡಿತರ ಚೀಟಿ ರದ್ದಾಗುವ ಮುನ್ನ | ತಾತ್ಕಾಲಿಕವಾಗಿ ಆದ್ಯತೇತರ ಪಡಿತರ |

## Owning OTHER THAN MENTIONED ABOVE

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು **2017** ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು
2. ಗ್ರಾಮೀಣ ಪ್ರದೇಶಗಳಲ್ಲಿ **03** ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ **1000** ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.
4. ಕುಟುಂಬದ ವಾರ್ಷಿಕ ಆದಾಯವು ರೂ. **1.20** ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಸದರಿ ಮಾನದಂಡಗಳ ವಿರುದ್ಧವಾಗಿ ಪಡೆದಿರುವ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆಹಚ್ಚಿ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ.

ಪಡಿತರ ಚೀಟಿಗಳನ್ನು ರದ್ದುಪಡಿಸುವ / ಪರಿವರ್ತಿಸುವ ಹಾಗೂ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ನೀಡುವ ಅಧಿಕಾರ ಸಂಬಂಧಿಸಿದ ಆಹಾರ ನಿರೀಕ್ಷಕರಿಗೆ ಇರುತ್ತದೆ

| | | |
|---|---|---|
| | ಪಕ್ಷಪಾತರಹಿತ, ಮಾನವೀಯ ಪರಿಶೀಲನೆಗಳನ್ನು ನಡೆಸಲಾಗಿತ್ತೇ; ತಾಂತ್ರಿಕ ದೋಷಗಳಿಂದ ಪಡಿತರ ಚೀಟಿಗಳು ನಿಷ್ಕ್ರಿಯವಾಗಿರುವುದಕ್ಕೆ ಪರಿಹಾರ ವ್ಯವಸ್ಥೆ ಮಾಡದೆ ಇರಲು ಕಾರಣವೇನು; ವೃದ್ಧರು, ಅಂಗವಿಕಲರು, ದಿನಗೂಲಿಗರಿಗಾಗಿ ವಿಶೇಷ ತಪಾಸಣೆ ಶಿಬಿರಗಳನ್ನು ಏಕೆ ಏರ್ಪಡಿಸಲಿಲ್ಲ; ಬಡವರ ಆಹಾರ ಹಕ್ಕಿಗೆ ಧಕ್ಕೆ ತಂದಂತಾಗುವುದಿಲ್ಲವೇ; | ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧ ಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಸರ್ಕಾರದ ಆದೇಶ ಸಂಖ್ಯೆ:ಇ-ಆನಾಸ 159 ಡಿಆರ್‌ಎ 2025 ದಿನಾಂಕ:30.10.2025 ರಲ್ಲಿ ಆದೇಶಿಸಲಾಗಿದೆ.<br><br>ಆದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ, ಸಂಬಂಧಪಟ್ಟ ತಹಶೀಲ್ದಾರ್‌ಗೆ ಮನವಿ ಸಲ್ಲಿಸಬಹುದಾಗಿದೆ. |
| ಋ | ಅನ್ಯಾಯವಾಗಿ ರದ್ದಾದ ಪಡಿತರ ಚೀಟಿಗಳನ್ನು ಮರುಸಕ್ರಿಯಗೊಳಿಸಲು ಕಾಲಮಾನ ಮತ್ತು ಸೂಚನೆಗಳನ್ನು ಪ್ರಕಟಿಸಲಾಗಿದೆಯೇ? | |

ಇ-ಆನಾಸ 337 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು